ನಿರ್ಮಿಸಲು ಅನುಮತಿ ನೀಡಲು ಮುಂದೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಕೇಂದ್ರ ಸರ್ಕಾರದೊಡನೆ ವ್ಯವಹರಿಸಿ ಈ ವಿಮಾನ ನಿಲ್ದಾಣವನ್ನು ಖಾಸಗಿ ವಲಯದಲ್ಲಿ ನಿರ್ಮಿಸಲು ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಜೆ.ಹೆಚ್.ಪಟೇಲ್ (ಮುಖ್ಯಮಂತ್ರಿಗಳು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಹೌದು.

ಈ) ಹೌದು.

ವಿಷಯ: ಕುರಗೋಡುನಲ್ಲಿ ಮಿನಿವಿಧಾನಸೌಧ ಸ್ಥಾಪನೆ.

1020 (1449)

ಶ್ರೀ ಅಲ್ಲಮ್ ವೀರಭದ್ರಪ್ಪ (ಕುರಗೋಡು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ತಾಲ್ಲೂಕಿನ ಕುರುಗೋಡು ವಿಧಾನಸಭಾ ಕ್ಷೇತ್ರದಲ್ಲಿ ಮಿನಿ ವಿಧಾನ ಸೌಧವನ್ನು ನಿರ್ಮಿಸಲಾಗಿದೆಯೇ?

ಆ) ಇಲ್ಲದಿದ್ದಲ್ಲಿ, 1998-99ರಲ್ಲಿ ನಿರ್ಮಿಸಲು ಕ್ರಮವನ್ನು ಕೈಗೊಳ್ಳಲಾಗುವುದೇ?

ಶ್ರೀ ಬಿ.ಸೋಮಶೇಖರ್ (ಕಂದಾಯ ಸಚಿವರು):

ಅ) ಇಲ್ಲ.

ಆ) ಇಲ್ಲ.

ವಿಷಯ: ಬಳ್ಳಾರಿ ಜಿಲ್ಲೆಯಲ್ಲಿ ಮಳೆ ಇಲ್ಲದೆ ಉಂಟಾಗಿರುವ ಹಾನಿ

1021 (1452)

ಶ್ರೀ ಅಲ್ಲಮ್ ವೀರಭದ್ರಪ್ಪ (ಕುರಗೋಡು): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?